# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 29ನೆಯ ದಿ ಕರ್ನಾಟಕ ಇತಿಹಾಸ ಕಾಂಗ್ರೆಸ್ ಮಹಾಸಮ್ಮೇಳನವನ್ನು ಆಯೋಜಿಸಲು ಅನುದಾನ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ ಪತ್ರ ಸಂಖ್ಯೆ: ಕೆಎಸ್ಎ-13016/31/2019 ಕೆಎಸ್ಎ_ಎನ್ಎಐ-ಕೆಎಸ್ಎ, ದಿನಾಂಕ: 03.01.2020.

-----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರು ಮುಖ್ಯಸ್ಥರು, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಾಯನ ವಿಭಾಗ, ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರು 29ನೆಯ ದಿ ಕರ್ನಾಟಕ ಇತಿಹಾಸ ಕಾಂಗ್ರೆಸ್ ಮಹಾಸಮ್ಮೇಳನವನ್ನು ಆಯೋಜಿಸಲು ಉತ್ಸುಕವಾಗಿರುವ ಬಗ್ಗೆ ತಿಳಿಸಿದ್ದು, ಸದರಿ ಸಮ್ಮೇಳನದಲ್ಲಿ ಮಂಡನೆಯಾಗುವ ಪ್ರಬಂಧ-ಸಂಶೋಧನಾ ಲೇಖನಗಳು ನಾಡಿನ ಇತಿಹಾಸ, ಕಲೆ, ಸಾಹಿತ್ಯ ಮತ್ತು ವಿವಿಧ ಸಾಂಸ್ಕೃತಿಕ ಕ್ಷೇತ್ರಗಳ ಹೆಜ್ಜೆ ಗುರುತುಗಳನ್ನು ಮೂಡಿಸುವಲ್ಲಿ ಸಹಕಾರಿಯಾಗಿದೆ. ಈ ಕಾರ್ಯಕ್ರಮವು ಮೂರು ದಿನಗಳ ಕಾಲ ಸದರಿ ವಿಶ್ವವಿದ್ಯಾಲಯದ ಆವರಣದಲ್ಲಿ ಸಂಬಂಧಿಸಿದ ಅಧ್ಯಾಯನ ವಿಭಾಗವು ಆಯೋಜಿಸಲು ಧನಸಹಾಯವನ್ನು ನೀಡಬೇಕೆಂದು ಕೋರಿರುತ್ತಾರೆ.

ಮುಂದುವರೆದು, 2019-20ನೇ ಸಾಲಿನ ಕ್ರಿಯಾಯೋಜನೆಯಲ್ಲಿ ವಿಚಾರ ಸಂಕಿರಣ/ ಕಾರ್ಯಾಗಾರ ಕಾರ್ಯಕ್ರಮಕ್ಕೆ ಕಾಯ್ದಿರಿಸುವ ಹಣ ಪೂರ್ಣವಾಗಿ ಹಂಚಿಕೆಯಾಗಿರುತ್ತದೆ. ಇದೇ ಸಾಲಿನ ಕ್ರಿಯಾ ಯೋಜನೆಯ ಲೆಕ್ಕಶೀರ್ಷಿಕೆ: 2205-00-104-0-01-059 ರಡಿ ಇತರೆ ಖರ್ಚುಗಳ ಕ್ರಮ ಸಂಖ್ಯೆ: 03 ರಲ್ಲಿ ಐತಿಹಾಸಿಕ ಪುಸ್ತಕಗಳ ಪ್ರಕಟಣೆ ಹಾಗೂ ಮೋಡಿ ಲಿಪಿ ದಾಖಲೆಗಳ ಭಾಷಾಂತರ ಕಾರ್ಯಕ್ರಮಕ್ಕೆ ರೂ.3.00ಲಕ್ಷ ಹಣ ಕಾಯ್ದಿರಿಸಲಾಗಿದ್ದು, ಈ ಕಾರ್ಯಕ್ರಮದಲ್ಲಿ ಈವರೆಗೂ ಉದ್ದೇಶಿತ ಕಾರ್ಯಕ್ಕೆ ರೂ.1.19ಲಕ್ಷಗಳು ವೆಚ್ಚವಾಗಿದ್ದು, ರೂ.1.81ಲಕ್ಷಗಳು ಉಳಿಕೆಯಾಗಿರುತ್ತದೆ. ಉದ್ದೇಶಿತ ಕಾರ್ಯಕ್ಕೆ ಹಣ ಮಂಜೂರು ಮಾಡುವ ಪ್ರಸ್ತಾವನೆಗಳು ಸದ್ಯಕ್ಕೆ ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ರೂ.1.50ಲಕ್ಷಗಳನ್ನು 29ನೆಯ ದಿ ಕರ್ನಾಟಕ ಇತಿಹಾಸ ಕಾಂಗ್ರೆಸ್ ಮಹಾಸಮ್ಮೇಳನವನ್ನು ಆಯೋಜಿಸಲು ಹಣಕಾಸು ಅಧಿಕಾರಿಗಳು ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರ ಹೆಸರಿಗೆ ಬಿಡುಗಡೆ ಮಾಡಲು ಸರ್ಕಾರದ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಬೆಂಗಳೂರು ರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 02 ರಾಪಸ ಆಕ 2020
## ಬೆಂಗಳೂರು, ದಿನಾಂಕ: 14.02.2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 29ನೆಯ ದಿ ಕರ್ನಾಟಕ ಇತಿಹಾಸ ಕಾಂಗ್ರೆಸ್ ಮಹಾಸಮ್ಮೇಳನವನ್ನು ಮುಖ್ಯಸ್ಥರು, ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಾಯನ ವಿಭಾಗ, ಕನ್ನಡ ವಿಶ್ವವಿದ್ಯಾಲಯ, ಹಂಪಿ ಇಲ್ಲಿ ಮೂರು ದಿನಗಳ ಕಾಲ ವಿಶ್ವವಿದ್ಯಾಲಯದ ಆವರಣದಲ್ಲಿ ಸಂಬಂಧಿಸಿದ ಅಧ್ಯಾಯನ ವಿಭಾಗವು ಆಯೋಜಿಸಲು ರೂ.1.50 (ಒಂದು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಇವರ ಮುಖಾಂತರ ಹಣಕಾಸು ಅಧಿಕಾರಿಗಳು ಕನ್ನಡ ವಿಶ್ವವಿದ್ಯಾಲಯ, ಹಂಪಿ ಇವರ ಹೆಸರಿಗೆ ಬಿಡುಗಡೆ ಮಾಡಲು ಮಂಜೂರಾತಿಯನ್ನು ನೀಡಲಾಗಿದೆ.

ಸದರಿ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ: 2205-00-104-0-01-059 ಇತರೆ ಖರ್ಚುಗಳಡಿಯಲ್ಲಿ ಭರಿಸತಕ್ಕದ್ದು.

ಸದರಿ ಅನುದಾನವನ್ನು ಬಳಸಿಕೊಂಡ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಒದಗಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 01 ಟಿಎಫ್‌ಪಿ 2020, ದಿನಾಂಕ: 13.01.2020ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ. ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ)

<u>ಪ್ರತಿ:</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಕನ್ನಡ ಭವನ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.